ಇ) ಬಂಕಾಪುರ ಕೋಟೆ ಆವರಣದಲ್ಲಿ ಸನ್ 1919ರಲ್ಲಿ ಕಲ್ಲು–ಮಣ್ಣಿನಿಂದ ಕಟ್ಟಿದ ರಸ ಮೇವಿನ ಗುಂಡಿಗಳಿದ್ದು ಇವುಗಳು ಸಂಪೂರ್ಣ ಹಾಳಾಗಿ ಹೋಗಿದ್ದು, ರಸಮೇವು ಸಂಗ್ರಹಣೆ ಮಾಡಲು ಬಾರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂಕಾಪುರ ಕೋಟೆಯಲ್ಲಿ ಡಿ ದರ್ಜೆ ಸಿಬ್ಬಂದಿ ಕೊರತೆ ತುಂಬಾ ಇದ್ದು, ಪ್ರಗತಿ ಸಾಧಿಸಲಿಕ್ಕೆ ಹಾಗೂ ದೈನಂದಿನ ಚಟುವಟಿಕೆಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಉ) ಹಾಗಿದ್ದಲ್ಲಿ, ಹೊಸ ಜಾನುವಾರು ಕೊಟ್ಟಿಗೆ ನಿರ್ಮಾಣ ಮಾಡಲು, ರಸ ಮೇವಿನ ಗುಂಡಿಗಳನ್ನು ನಿರ್ಮಿಸಲು, ಡಿ ದರ್ಜೆ ಸಿಬ್ಬಂದಿ ನೇಮಕ ಮಾಡಲು ಹಾಗೂ ಮೇವು ಸಂಗ್ರಹಗಾರ ನಿರ್ಮಾಣಕ್ಕೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳುತ್ತದೆ ?

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು):

ಅ) ಬಂದಿದೆ

ಆ) ಬಂದಿದೆ

ಇ) ಬಂದಿದೆ

ಈ) ಬಂದದೆ

ಉ) ಹಾಲಿ ಕ್ಷೇತ್ರದಲ್ಲಿರುವ ಜಾನುವಾರುಗಳ ಪೈಕಿ ಕೆಲವು ಜಾನುವಾರುಗಳ ಪೈಕಿ ಕೆಲವು ಜಾನುವಾರುಗಳನ್ನು ವಾರ್ಷಿಕ ವಿಲೇವಾರು ಮಾಡಿದ ನಂತರ ಉಳಿದ ಜಾನುವಾರುಗಳಿಗೆ ಅವಶ್ಯವಿರುವ ಕೊಟ್ಟಿಗೆ ನಿರ್ಮಾಣ ಮತ್ತು ಇತರೆ ಕಾಮಗಾರಿಗಳನ್ನು ಅನುದಾನದ ಲಭ್ಯತೆಗನುಗುಣವಾಗಿ ತೆಗೆದುಕೊಳ್ಳಲಾಗುವುದು.

'ಡಿ' ದರ್ಜೆ ನೌಕರರ ಹುದ್ದೆಗಳ ಸಾಕಷ್ಟು ಸಂಖ್ಯೆಯಲ್ಲಿ ಸದರಿ ಕ್ಷೇತ್ರಕ್ಕೆ ಸೃಷ್ಟಿಸಿಲ್ಲವಾದ ಕಾರಣ ದೈನಂದಿನ ಮತ್ತು ಋತುಮಾನ ಕೆಲಸಗಳನ್ನು ದರಗುತ್ತಿಗೆ ಆಧಾರದ ಮೇಲೆ ನಿರ್ವಹಿಸಲಾಗುತ್ತಿದೆ.

102 (176) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ): ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಡಿ. ದೇವರಾಜ ಅರಸ್ ಅಭಿವೃದ್ಧಿ ನಿಗಮಗಳ ವತಿಯಿಂದ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 2005–06ನೇ ಸಾಲಿನ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿಗಳನ್ನು ಕೊರೆದಿದ್ದು, ಈ ಪೈಕಿ ಕೆಲವರಿಗೆ ಇದುವರೆವಿಗೂ ಪಂಪು ಮೋಟಾರ್ ವಿತರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಅ) ಬಂದಿದೆ.

ಆ) ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ 14 ಕೊಳವೆ ಬಾವಿಗಳಿಗೆ ಪಂಪುಸೆಟ್ಟು ಅಳವಡಿಸಬೇಕಾಗಿರುತ್ತದೆ.

2005–06ನೇ ಸಾಲಿನಲ್ಲಿ ನಿಗದಿಪಡಿಸಿದ ಗರಿಷ್ಟ ರೂ. 65,000/– ಸಹಾಯ ಧನದಲ್ಲಿ ಬಾವಿ ಕೊರೆದು ಪಂಪ್ ಅಳವಡಿಸಿ ವಿದ್ಯುದ್ದೀಕರಣಗೊಳಿಸಲು ಆಗಲಿಲ್ಲ. ಆದಕಾರಣ ರೂ. 65,000/– ಸಹಾಯ ಧನದೊಂದಿಗೆ ರೂ. 15,000/– ಅವಧಿ ಸಾಲವನ್ನು, ರಾಷ್ಟ್ರೀಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಣಕಾಸು ಅಭಿವೃದ್ಧಿ ನಿಗಮ, ಹೊಸದೆಹಲಿ ಇವರಿಂದ ಶೇ: 6ರ ಬಡ್ಡಿ ದರದಲ್ಲಿ ಸಾಲ ಪಡೆದು, ಒಟ್ಟು ರೂ. 80,000/–ಗಳ ಘಟಕ ವೆಚ್ಚದಲ್ಲಿ ಕೊಳವೆ ಬಾವಿ ಕೊರೆದು, ಪಂಪ್‌ಸೆಟ್ ಅಳವಡಿಸಿ, ವಿದ್ಯುದ್ದೀಕರಣಗೊಳಿಸಲು ನಿರ್ದೇಶನ ನೀಡಲಾಗಿದೆ.

ಅದರಂತೆ ಅವಧಿಸಾಲಕ್ಕೆ ಫಲಾನುಭವಿಗಳಿಂದ ಅಗತ್ಯ ದಾಖಲಾತಿಗಳನ್ನು ಪಡೆದು ಸಾಲ ಮಂಜುರು ಮಾಡಬೇಕಾಗಿದ್ದು, ಈ ಸಂಬಂಧ ಫಲಾನುಭವಿಗಳು ಅಗತ್ಯ ದಾಖಲಾತಿಗಳನ್ನು ಒದಗಿಸದೇ ಇರುವುದರಿಂದ ವಿಳಂಬವಾಗುತ್ತಿದೆ. ಬಾಕಿ ಇರುವ ಎಲ್ಲಾ ಕೊಳವೆ ಬಾವಿಗಳಿಗೆ ಫಲಾನುಭವಿಗಳಿಗೆ ಅಗತ್ಯ ದಾಖಲಾತಿಗಳನ್ನು ಪಡೆದು, ಶೀಘ್ರ ಸಾಲ ಮಂಜೂರು ಮಾಡಿಸಿ ಎಲ್ಲಾ ಕೊಳವೆ ಬಾವಿಗಳಿಗೆ ಪಂಪ್‌ಸೆಟ್‌ಗಳನ್ನು ಅಳವಡಿಸಲು ಸೂಕ್ತ ನಿರ್ದೇಶನ ನೀಡಲಾಗಿದೆ.

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ 2005–06ನೇ ಸಾಲಿಗೆ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆಯಲ್ಲಿ ಬಾಗೇಪಲ್ಲಿ ಕ್ಷೇತ್ರದಲ್ಲಿ 5 ಕೊಳವೆ ಬಾವಿಗಳನ್ನು ಕೊರೆಯಿಸಲಾಗಿರುತ್ತದೆ. ಈ ಪೈಕಿ 4 ಕೊಳವೆ ಬಾವಿಗಳಿಗೆ ಪಂಪ್‌ಸೆಟ್ ಅಳವಡಿಸಲಾಗಿದ್ದು, ಉಳಿದ 1 ಕೊಳವೆ ಬಾವಿಗೆ ಇತ್ತೀಚೆಗೆ ಪಂಪ್‌ಸೆಟ್ ಸರಬರಾಜು ಮಾಡಲಾಗಿದೆ.

103 (177) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಕಾರ್ಮಿಕ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಾಗೇಪಲ್ಲಿಯಲ್ಲಿನ ಸರ್ಕಾರಿ ಐಟಿಐಗೆ ಸ್ವಂತ ಕಟ್ಟಡ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಸದರಿ ಐಟಿಐಗೆ ಸ್ವಂತ ಕಟ್ಟಡ ನಿರ್ಮಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

ಇ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಳ್ಳುವ ಕ್ರಮವೇನು ?